ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ,
ಶ್ರೀರಂಗಪಟ್ಟಣ. DW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ : 16.12.2024

ಮುಂದುವರೆದ ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ

ನಿಡಿ.26 ರಲ್ಲಿ ಇರುವ ಆಸ್ತಿಯಾದ ಸರ್ವೆ ನಂ.130/1 ಆಸ್ತಿಯನ್ನು ಈ ದಾವೆಯಲ್ಲಿ ಸೇರಿಸಿರುವುದಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಸೇರಿಸಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಆಸ್ತಿಯು ಒಟ್ಟು ಕುಟುಂಬದ ಆಸ್ತಿ ಆಗಿದ್ದ ಕಾರಣ ಅದನ್ನು ಅದರ ಅವಶ್ಯಕತೆಗಳಿಗೆ ಮಾರಾಟ ಮಾಡಿರುವ ಕಾರಣ ಸದರಿ ಆಸ್ತಿಯನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸರಿಯಲ್ಲ. ಭೂನ್ಯಾಯಾ ಮಂಡಳಿ ನೀಡಿದ್ದ ಆದೇಶದ ವಿರುದ್ದ ನೀವು ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಿರುತ್ತೀರಿ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಭೂನ್ಯಾಯಾ ಮಂಡಳಿಯಲ್ಲಿ ಇತ್ಯರ್ಥ ಆದ ನಂತರ ತಹಶೀಲ್ದಾರ್ ರವರು ನರಸಮ್ಮ ರವರಿಗೆ ತಿಳುವಳಿಕೆ ಚೀಟಿಯನ್ನು ನೀಡಿರುತ್ತಾರೆ ಎಂದರೆ ಸರಿ. ನಿಡಿ.30 ರಿಂದ 35 ದಾಖಲೆಗಳಲ್ಲಿರುವ ಹಣವು ನರಸಮ್ಮರವರಿಗೆ ಬಂದಿರುತ್ತದೆ ಎಂದರೆ ಸರಿ. ದಾವಾ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳು ಆಗಿರುವ ಕಾರಣ ಅವುಗಳು ನರಸಮ್ಮರವರ ಹೆಸರಿನಲ್ಲಿ ಇದ್ದು ಕುಟುಂಬದ ವ್ಯವಹಾರಗಳನ್ನು ಅವರೇ ನೋಡಿಕೊಳ್ಳುತ್ತಿದ್ದರು ಎಂದರೆ ಸರಿಯಲ್ಲ. ನನ್ನ ತಂಗಿಯರಿಗೆ ಭಾಗಾಂಶ ನೀಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.